ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
**Karnataka School Quality Assessment & Accreditation Council**
ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
ಫ್ಯಾಕ್ಸ್: 080–23347670, e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: ಕೆ3/ NTSE-NMMS ಪರೀಕ್ಷೆ/29/2019–20 ದಿನಾಂಕ:31.10.2019

## ಜ್ಞಾಪನ

ವಿಷಯ: NTSE-NMMS ಪರೀಕ್ಷೆಗಳ ಪ್ರವೇಶ ಪತ್ರಗಳನ್ನು (Hall Ticket) Download ಮಾಡಿಕೊಂಡು ವಿದ್ಯಾರ್ಥಿಗಳಿಗೆ ವಿತರಿಸುವ ಬಗ್ಗೆ.

*************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2019–20 ನೇ ಸಾಲಿನ NTSE-NMMS ಪರೀಕ್ಷೆಗಳನ್ನು ಕೆ.ಎಸ್.ಕ್ಯು.ಎ.ಎ.ಸಿ, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ವತಿಯಿಂದ **ದಿನಾಂಕ:17.11.2019** ರಂದು ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರಗಳು (Hall Ticket) ಕೆ.ಎಸ್.ಇ.ಇ.ಬಿ ವೆಬ್‌ಸೈಟ್‌ನ School Login ನಲ್ಲಿ ದಿನಾಂಕ:02.11.2019 ರಿಂದ ಲಭ್ಯವಿರುತ್ತದೆ.

- ವಿದ್ಯಾರ್ಥಿಗಳ ಪ್ರವೇಶ ಪತ್ರಗಳು ಶಾಲಾ ಲಾಗಿನ್‌ನಲ್ಲಿ ದೊರೆಯುತ್ತವೆ. ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಪ್ರವೇಶ ಪತ್ರಗಳನ್ನು (Hall Ticket) Download ಮಾಡಿಕೊಂಡು ಸಹಿ ಮಾಡಿ ಮೊಹರನ್ನು ಹಾಕಿ ದಿನಾಂಕ: 06.11.2019 ರೊಳಗೆ ವಿದ್ಯಾರ್ಥಿಗಳಿಗೆ ವಿತರಿಸುವುದು. ಪ್ರವೇಶಪತ್ರವಿಲ್ಲದ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಹಾಜರುಪಡಿಸಲಾಗುವುದಿಲ್ಲ.
- ಪ್ರವೇಶ ಪತ್ರದಲ್ಲಿ ವಿದ್ಯಾರ್ಥಿಯು ಪರೀಕ್ಷೆ ಬರೆಯುವ ಕೇಂದ್ರ, ಪರೀಕ್ಷೆಯ ಹೆಸರು, ವೇಳಾಪಟ್ಟಿ ಮತ್ತು ವಿದ್ಯಾರ್ಥಿಯ ಭಾವಚಿತ್ರ ಹಾಗೂ ಇತರೆ ವಿವರಗಳು ಪೂರ್ವ ಮುದ್ರಿತವಾಗಿರುತ್ತವೆ. ಈ ಪೂರ್ವ ಮುದ್ರಿತ ಮಾಹಿತಿಗಳನ್ನು ಪರಿಶೀಲಿಸಿಕೊಂಡು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ವಿತರಿಸುವುದು ಕಡ್ಡಾಯ.
- ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವಾಗ ಯಾವ ಭಾವಚಿತ್ರವನ್ನು Uplode ಮಾಡಿರುತ್ತಾರೊ ಅದೇ ಭಾವಚಿತ್ರ ಪೂರ್ವ ಮುದ್ರಿತವಾಗಿರುತ್ತದೆ. ಶಾಲಾ ಹಂತದಲ್ಲಿ ಭಾವಚಿತ್ರಗಳ ಬದಲಾವಣೆಗೆ ಅವಕಾಶವಿರುವುದಿಲ್ಲ.
- ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ನಿಗದಿಪಡಿಸಿರುವ ಪರೀಕ್ಷಾ ಕೇಂದ್ರದ ಮಾಹಿತಿಯನ್ನು ಹಾಗೂ ಸೂಕ್ತ ಮಾರ್ಗದರ್ಶನವನ್ನು ಸಂಬಂಧಿಸಿದ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ನೀಡುವುದು.
- ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವಾಗ ಯಾವ ಮಾಹಿತಿಗಳನ್ನು ನೀಡಲಾಗಿರುತ್ತದೆಯೊ ಅದೇ ಮಾಹಿತಿಗಳು ಪ್ರವೇಶ ಪತ್ರದಲ್ಲಿ ಪೂರ್ವ ಮುದ್ರಿತವಾಗಿರುತ್ತದೆ. ತೀರಾ ಅಗತ್ಯವಾದ ಸಂದರ್ಭದಲ್ಲಿ ಪ್ರವೇಶ ಪತ್ರದಲ್ಲಿನ ಮಾಹಿತಿಯನ್ನು ತಿದ್ದುಪಡಿ ಮಾಡಬೇಕಾದಲ್ಲಿ ಪ್ರಸ್ತಾವನೆಯನ್ನು ಪೂರಕ ದಾಖಲೆಗಳೊಂದಿಗೆ ಬಿ.ಇ.ಒ ರವರ ದೃಢೀಕರಣದೊಂದಿಗೆ ಕೆ.ಎಸ್.ಕ್ಯು.ಎ.ಎ.ಸಿ ವಿಭಾಗಕ್ಕೆ ದಿನಾಂಕ: 11.11.2019 ಕ್ಕೆ ಮುಂಚಿತವಾಗಿ ತಲುಪುವಂತೆ ಸಲ್ಲಿಸುವುದು.

ಈ ಮೇಲಿನ ಎಲ್ಲಾ ಅಂಶಗಳನ್ನು ಗಮನಿಸಿ, ಶಾಲಾ ಸಹಿ ಮತ್ತು ಮೊಹರನ್ನು ನಮೂದಿಸಿ ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರಗಳನ್ನು ವಿತರಿಸುವಂತೆ, ಎಲ್ಲಾ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಮಾಹಿತಿಯನ್ನು ನೀಡಲು ಉಪನಿರ್ದೇಶಕರು (ಅಭಿವೃದ್ಧಿ), NTSE/NMMS ಪರೀಕ್ಷೆಗಳಿಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

ಪ್ರತಿಯನ್ನು:-

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ ಸೂಕ್ತ ಕ್ರಮಕ್ಕಾಗಿ.
2. NTSE/ NMMS ಪರೀಕ್ಷೆಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಸೂಕ್ತ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
5. ಕಛೇರಿ ಪ್ರತಿ.